CC No.179/2020
CW-9  PW-7

**ಪ್ರಧಾನ ವ್ಯವಹಾರ ನ್ಯಾಯಾಧೀಶರು ಮತ್ತು  ಜೆ.ಎಂ.ಎಫ್.ಸಿ ನ್ಯಾಯಾಲಯ, ಸೊರಬ**

**ಸಿ ಸಿ ನಂ. 179/2020**

| | | |
|---|---|---|
| **ಹೆಸರು** | :- | **ಡಾ. ಮಹಾಲಿಂಗಪ್ಪ ಕೋಳೆ** |
| **ಗಂಡನ ಹೆಸರು** | :- | **ಅಶೋಕ ಕೋಳೆ** |
| **ವಯಸ್ಸು** | :- | **35 ವರ್ಷ** |
| **ಉದ್ಯೋಗ** | :- | **ವೈದ್ಯಾಧಿಕಾರಿ** |
| **ಸ್ಥಳ** | :- | **ಶಿರಾಳಕೊಪ್ಪ** |

**ದಿನಾಂಕಃ 05.08.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ನಾನು ದಿನಾಂಕಃ 30.08.2019 ರಿಂದ ಮೇ 2021 ರವರೆಗೆ ಸೊರಬ ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ. ಈಗ ಸೊರಬ ಸರ್ಕಾರಿ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿಃ 20.12.20219 ರಂದು ಚಾಸಾ-2 ರವರು ಹಲ್ಲೆಯ ಹಿನ್ನಲೆಯಲ್ಲಿ ನಮ್ಮ ಆಸ್ಪತ್ರೆಗೆ ಚಿಕಿತ್ಸೆಗೆ ದಾಖಲಾಗಿದ್ದು, ಸದರಿಯವರನ್ನು ಪರೀಕ್ಷಿಸಿದಾಗ ಅವರಿಗೆ ಈ ಕೆಳಕಂಡ ಗಾಯಗಳು ಕಂಡಬಂದಿರುತ್ತವೆ.

1. ಮೇಲು ತುಟಿಯಲ್ಲಿ ಊತ ಕಂಡುಬಂದಿರುತ್ತದೆ.

2. ಎಡ ಮೊಣಕಾಲಿನ ಕೆಳಭಾಗದಲ್ಲಿ ಊತ ಕಂಡುಬಂದಿರುತ್ತದೆ.

ಸದರಿಯವರಿಗೆ ಆದ ಗಾಯಗಳು ಸಾಮಾನ್ಯ ಸ್ವರೂಪದ ಗಾಯಗಳು ಎಂದು ಗಾಯದ ಪ್ರಮಣ ಪತ್ರವನ್ನು ನೀಡಿರುತ್ತೇನೆ. ಸಾಕ್ಷಿಯು ಗಾಯದ ಪ್ರಮಾಣ ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ–8 ಮತ್ತು ಸಾಕ್ಷಿಯ ಸಹಿಯನ್ನು ನಿಪಿ–8 ಎ ಎಂದು ಗುರುತಿಸಲಾಯಿತು. ಸದರಿ ಗಾಯದ ಪ್ರಮಾಣ ಪತ್ರದಲ್ಲಿ ನಮೂದಿಸಿದ ಗಾಯಗಳು ನ್ಯಾಯಾಲಯದ ಮುಂದೆ ಇರುವ ಎಂ.ಓ–1 ಮತ್ತು 2 ರಿಂದ ಹಲ್ಲೆ ಮಾಡಿದಾಗ ಆಗುತ್ತವೆ ಅಂದರೆ ಸಾಕ್ಷಿಯು ಆಗಬಹುದು ಎಂದು ಉತ್ತರಿಸುತ್ತಾರೆ.

**<u>ಪಾಟಿ ಸವಾಲುಃ ಆರೋಪಿ ಪರ ಶ್ರೀ ವೈ.ಜಿ.ಪಿ. ವಕೀಲರಿಂದಃ</u>**

ಆಕಳ ಕರುಗಳು ಹಿಂಬದಿಯಿಂದ ಒದ್ದಾಗ ಮೇಲೆ ಹೇಳಿದ ಗಾಯಗಳು ಆಗುವ ಸಾಧ್ಯತೆಗಳು ಇದೆ ಅಂದರೆ ಸರಿ. ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲಃ**

**(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಕಂಪ್ಯೂಟರೀಕರಿಸಲಾಯ್ತು).**
**ಓ.ಹೇ.ಕೇ. ಸರಿ ಇದೆ ಎಂದು ಒಪ್ಪಿದ್ದಾರೆ.**

**ಪ್ರಧಾನ ವ್ಯವಹಾರ ನ್ಯಾ ಮತ್ತು ಜೆ.ಎಂ.ಎಫ್.ಸಿ**
**ಸೊರಬ.**